ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ವಾರ್ತೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ　　ದಿನಾಂಕ : DATE : 19/02/2020

# ದಾವಣಗೆರೆ ಮೇಯರ್ ಆಯ್ಕೆಗೆ ಹೈಕೋರ್ಟ್ ಓಕೆ

## ವಿಳಾಸ ವಿವಾದ ಇದ್ದರೂ ಇಂದು ಚುನಾವಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ದಾವಣಗೆರೆ ಮಹಾನಗರ ಪಾಲಿಕೆ ಮೇಯರ್, ಉಪ ಮೇಯರ್ ಸ್ಥಾನಕ್ಕೆ ಬುಧವಾರ (ಫೆ.19) ನಡೆಯಲಿರುವ ಚುನಾವಣೆಗೆ ಹಸಿರು ನಿಶಾನೆ ತೋರಿರುವ ಹೈಕೋರ್ಟ್, ಪ್ರಕ್ರಿಯೆ ಮತ್ತು ಫಲಿತಾಂಶ ನ್ಯಾಯಾಲಯದ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ ಎಂದು ಸ್ಪಷ್ಟಪಡಿಸಿದೆ.

ಎಂ. ಸುಧಾ ಹಾಗೂ ಇತರರು ಸಲ್ಲಿಸಿದ ತಕರಾರು ಅರ್ಜಿ ವಿಚಾರಣೆ ನಡೆಸಿದ ನ್ಯಾ. ಎಸ್. ಸುನೀಲ್‌ದತ್ ಯಾದವ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಮಧ್ಯಂತರ ಆದೇಶ ಮಾಡಿದೆ. ಜೊತೆಗೆ, 12 ಮಂದಿ ವಿಧಾನ ಪರಿಷತ್ ಸದಸ್ಯರು ಸೇರಿದಂತೆ ಅರ್ಜಿಯಲ್ಲಿನ ಎಲ್ಲ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿರುವ ನ್ಯಾಯಪೀಠ, ಬೆಂಗಳೂರು ಪ್ರಾದೇಶಿಕ ಆಯುಕ್ತರನ್ನು ಪ್ರತಿವಾದಿಯನ್ನಾಗಿ ಸೇರಿಸಲು ಅರ್ಜಿಯಲ್ಲಿ ಅಗತ್ಯ ತಿದ್ದುಪಡಿ ಮಾಡುವಂತ ಅರ್ಜಿದಾರರಿಗೆ ಸೂಚಿಸಿದೆ. ಚುನಾವಣೆಯ ಫಲಿತಾಂಶ ತಕರಾರು ಅರ್ಜಿಯ ಅಂತಿಮ ಇತ್ಯರ್ಥಕ್ಕೆ ಒಳಪಟ್ಟಿದೆ ಎಂದು ಸ್ಪಷ್ಟ ಪಡಿಸಿ, ಫೆ.24ಕ್ಕೆ ವಿಚಾರಣೆ ಮುಂದೂಡಿತು.

## ಎಂಎಲ್‌ಸಿಗಳಿಗೆ ಡೀಸಿ ನೋಟಿಸ್

ದಾವಣಗೆರೆ: ಮೇಯರ್ ಮತ್ತು ಉಪಮೇಯರ್ ಚುನಾವಣೆಗೆ ನಕಲಿ ವಿಳಾಸ ನೀಡಿ ಮತದಾದರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ ಎನ್ನಲಾಗಿದ್ದ 12 ಎಂಎಲ್‌ಸಿಗಳಿಗೆ ದಾವಣಗೆರೆ ಜಿಲ್ಲಾಧಿಕಾರಿಗಳು ನೋಟಿಸ್ ನೀಡಿದ್ದಾರೆ. ಬಿಜೆಪಿ ಎಂಎಲ್‌ಸಿಗಳು ನಕಲಿ ವಿಳಾಸ ನೀಡಿದ್ದಾರೆ ಎಂದು ಕಾಂಗ್ರೆಸ್ ದೂರಿತ್ತು. ಈ ದೂರಿನ ಹಿನ್ನೆಲೆಯಲ್ಲಿ ಐಎಎಸ್ ಅಧಿಕಾರಿ ಹರ್ಷ ಗುಪ್ತ ಮತದಾರರ ಪಟ್ಟಿ ಪರಿಷ್ಕರಣೆ ಮಾಡಿದ್ದು, ಬಿಜೆಪಿ 8 ಮತ್ತು ಕಾಂಗ್ರೆಸ್‌ನ 4 ಎಂಎಲ್‌ಸಿಗಳು ನಕಲಿ ವಿಳಾಸ ನೀಡಿರುವುದು ಪರಿಶೀಲನೆ ವೇಳೆ ಬೆಳಕಿಗೆ ಬಂದಿದೆ ಎನ್ನಲಾಗಿದೆ.

15